# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/62/2019–20

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 9/8/19

## ಸುತ್ತೋಲೆ

ವಿಷಯ: ಬೆಂಗಳೂರು ನಗರದಾದ್ಯಂತ ಮಳೆ ಸುರಿಯುತ್ತಿರುವ ಬಗ್ಗೆ.

ಉಲ್ಲೇಖ: ಪೂಜ್ಯ ಮಹಾಪೌರರ ಟಿಪ್ಪಣಿ ಸಂಖ್ಯೆ: ಎಂ.ಪಿ.ಎಸ್/ಪಿಆರ್/888/2019–20, ದಿನಾಂಕ: 08–08–2019.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಬೆಂಗಳೂರು ನಗರದಾದ್ಯಂತ ಧಾರಾಕಾರ ಮಳೆ ಸುರಿಯುತ್ತಿದ್ದು, ದಿನಾಂಕ: 08–08–2019 ರಿಂದ ಮಳೆ ಹೆಚ್ಚಾಗುವ ಸಂಭವವಿರುವುದಾಗಿ ಹವಾಮಾನ ಇಲಾಖೆಯು ವರದಿ ಮಾಡಿರುತ್ತದೆ. ಪ್ರಸ್ತುತ ಮಳೆ ಹೆಚ್ಚಾಗುವ ಸಂಭವವಿರುವುದರಿಂದ ತಗ್ಗು ಪ್ರದೇಶಗಳಿಗೆ ನುಗ್ಗಿ ನೆರೆ ಹಾವಳಿಯುಂಟಾಗುವ ಸಂಭವವಿರುತ್ತದೆ. ಆಕಸ್ಮಿಕ ಘಟನೆ ಉಂಟಾದ ಸಂದರ್ಭಗಳಲ್ಲಿ ಆಗಿಂದಾಗ್ಗೆ ಅಗತ್ಯಕ್ರಮ ತೆಗೆದುಕೊಳ್ಳಬೇಕಾಗಿರುವುದರಿಂದ ಎಲ್ಲಾ ವಲಯಗಳ ಜಂಟಿ ಆಯುಕ್ತರುಗಳು ತಮ್ಮ ವ್ಯಾಪ್ತಿಯ ಮುಖ್ಯ ಅಭಿಯಂತರರು ಮತ್ತು ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಅಗತ್ಯ ಸಿಬ್ಬಂದಿಗಳು ಮತ್ತು ಸೂಕ್ತ ಯಂತ್ರೋಪಕರಣಗಳೊಂದಿಗೆ ನಿಯಂತ್ರಣಾ ಕೊಠಡಿಗಳಲ್ಲಿ ಹಾಜರಿದ್ದು, ಸಾರ್ವಜನಿಕರಿಂದ ಬರಬಹುದಾದ ದೂರುಗಳನ್ನು ಸ್ವೀಕರಿಸಿ ಕೂಡಲೇ ಕ್ರಮ ತೆಗೆದುಕೊಳ್ಳುವಂತೆ ಹಾಗೂ ದಿನಾಂಕ: 10–08–2019 ರಿಂದ ಸಾಲು ಸಾಲು ರಜೆಗಳಿರುವುದರಿಂದ ಯಾವುದೇ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ರಜೆಯ ಮೇಲೆ ತೆರಳಬಾರದೆಂದು / ಕೇಂದ್ರ ಸ್ಥಾನವನ್ನು ಬಿಡಬಾರದೆಂದು ಮತ್ತು ತುರ್ತು ಪರಿಸ್ಥಿತಿಯಲ್ಲಿ ಮಾತ್ರ ಸಕ್ಷಮ ಪ್ರಾಧಿಕಾರದ ಅನುಮತಿಯನ್ನು ಪಡೆದ ನಂತರವೇ ಕೇಂದ್ರ ಸ್ಥಾನವನ್ನು ಬಿಡುವಂತೆ ಸೂಚಿಸಿದೆ.

ಅಪರ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಆಯುಕ್ತರು/ವಿಶೇಷ ಆಯುಕ್ತರು (ಯೋಜನೆ/ಹಣಕಾಸು) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಕೌನ್ಸಿಲ್ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಯ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
: ಎಲ್ಲಾ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರು / ಬಟವಾಡೆ ಅಧಿಕಾರಿಗಳು ನಿಯಂತ್ರಣ ಕೊಠಡಿಗಳಿಗೆ ತಿಳಿಸಲು ಸೂಚಿಸಿದೆ.
: ಸಾರ್ವಜನಿಕ ಸಂಪರ್ಕಾಧಿಕಾರಿ ರವರಿಗೆ ಮಾಹಿತಿಗೆ ಹಾಗೂ ಅಗತ್ಯಕ್ರಮಕ್ಕಾಗಿ ಕಳುಹಿಸಿದೆ.
: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಕಛೇರಿ ಪ್ರತಿ.